# ಸಾಮೂಹಿಕ ಕಲ್ಯಾಣ ಮಹೋತ್ಸವ

**ಚಿತ್ರದುರ್ಗ, ಡಿ. 05.** - ಸತಿ-ಪತಿಗಳ ಮನಸ್ಸು ಒಂದಾಗದಿದ್ದರೆ ಸಂಸಾರದಲ್ಲಿ ವಿರಸ ಮೂಡುತ್ತದೆ. ದಂಪತಿಗಳ ಮಧ್ಯೆ ಅನುಮಾನ ಬರಬಾರದು. ದಂಪತಿಗಳು ಪರಸ್ಪರ ನಂಬಿಕೆಯಿಂದ ಸುಂದರ ಜೀವನ ಸಾಗಿಸಬೇಕು ಎಂದು ಶ್ರೀ ಬಸವಪ್ರಭು ಸ್ವಾಮಿಗಳು ನುಡಿದರು.

ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಮತ್ತು ಎಸ್.ಜೆ.ಎಂ. ಶಾಂತಿ ಮತ್ತು ಪ್ರಗತಿ ಫೌಂಡೇಶನ್ ವತಿಯಿಂದ ನಡೆದ ಮೂವತ್ತೆರಡನೇ ವರ್ಷದ ಹನ್ನೆರಡನೇ ತಿಂಗಳ ಸಾಮೂಹಿಕ ಕಲ್ಯಾಣ ಮಹೋತ್ಸವದ ಸಾನ್ನಿಧ್ಯವಹಿಸಿ ಮಾತನಾಡಿದ ಶ್ರೀಗಳು, ಅನುಮಾನ ಒಂದು ದೊಡ್ಡರೋಗ. ಇದರಿಂದ ಎಷ್ಟೋ ಸಂಸಾರಗಳು ಹಾಳಾಗಿವೆ. ನಂಬಿಕೆ ಇದ್ದರೆ ಜೀವನ ಸುಸೂತ್ರವಾಗಿ ನಡೆಯುತ್ತದೆ. ಅನುಮಾನ ಮತ್ತು ಅಹಂಕಾರ ಬದುಕನ್ನು ತುಂಡರಿಸುತ್ತದೆ. ಅಹಂಕಾರದಿಂದ ಎಷ್ಟೋ ಜನರು ಅನಾಥಾಶ್ರಮ ಸೇರಿದ್ದಾರೆ. ಇದಕ್ಕೆ ಒಳಗಾಗುವವರು ಹೆಚ್ಚು ಬುದ್ಧಿವಂತರು. ಜನರಲ್ಲಿ ಸೇವಾಭಾವನೆ ಕಡಿಮೆ ಆಗುತ್ತಿದೆ. ಸತಿ ಪತಿಗಳು ಸ್ನೇಹಿತರಂತೆ ಇರಬೇಕು. ಸುಳ್ಳು ಹೇಳುವುದನ್ನು ಕಡಿಮೆ ಮಾಡಬೇಕು. ನಂಬಿಕೆ ಎಂಬ ಸೂಜಿಯಿಂದ ಜೀವನವನ್ನು ಜೋಡಿಸಬೇಕು. ನಮಗೆ ಅರಿವು ಜ್ಞಾನ ಪ್ರಜ್ಞೆ ಮುಖ್ಯ. ಬಸವಾದಿ ಶರಣರು ವೈಚಾರಿಕ ತತ್ವದ ಹಿನ್ನೆಲೆಯಲ್ಲಿ ಸಮಾಜವನ್ನು ತಿದ್ದುವ ಕೆಲಸ ಮಾಡಿದರು. ಶ್ರೀಮಠದಲ್ಲಿ ಧಾರ್ಮಿಕ ಸಾಮಾಜಿಕ ಶೈಕ್ಷಣವಾಗಿ ಎಲ್ಲ ಕೆಲಸ ಕಾರ್ಯಗಳು ಸುಗಮವಾಗಿ ನಡೆಯುತ್ತಿವೆ. ಯಾವದೇ ಊಹಾಪೆ್ಞೀಹಗಳಿಗೆ ಕಿವಿಗೊಡಬಾರದಾಗಿ ಮನವಿ ಮಾಡಿದರು.

ಶಿಕಾರಿಪುರ ವಿರಕ್ತಮಠದ ಶ್ರೀ ಚೆನ್ನಬಸವ ಸ್ವಾಮಿಗಳು ಮಾತನಾಡಿ, ಎಲ್ಲೋ ಹುಟ್ಟಿದ ಗಂಡು-ಹೆಣ್ಣು ಮದುವೆಯಲ್ಲಿ ಒಂದಾಗುತ್ತಾರೆ. ಮನಸ್ಸುಗಳು ಒಂದಾಗಬೇಕು. ಒಬ್ಬರನ್ನೊಬ್ಬರು ಅರ್ಥೈಸಿಕೊಳ್ಳಬೇಕು. ಸತಿಪತಿಗಳೊಂದಾದ ಭಕ್ತಿ ಶಿವಂಗೆ ಹಿತವಾಗಿರುತ್ತದೆ. ಮನುಷ್ಯ ಪ್ರತಿಯೊಬ್ಬರನ್ನು ಪ್ರೀತಿಯಿಂದ ಕಾಣಬೇಕು. ಕಷ್ಟಗಳನ್ನು ಮನುಷ್ಯ ಸಹಿಸಿಕೊಂಡರೆ ಉನ್ನತ ಮಟ್ಟಕ್ಕೆ ಏರಲು ಸಾಧ್ಯವಾಗುತ್ತದೆ ಎಂದು ನುಡಿದರು.

ತುಮಕೂರು ಡಿ.ಕಲ್ಕೇರೆಯ ಶ್ರೀ ತಿಪ್ಪೇರುದ್ರ ಸ್ವಾಮಿಗಳು ಮಾತನಾಡಿ, ಬಸವಾದಿ ಪ್ರಮಥರು ಶಾಂತಿಯಿಂದ ಕ್ರಾಂತಿ ಮಾಡಿದರು. ಆರೋಗ್ಯಪೂರ್ಣವಾದ ಸಮಾಜದ ರಚನೆಗೆ ನಾವು ಮುಂದಾಗಬೇಕು. ಸದಾ ಒಳಿತನ್ನು ಮಾಡುತ್ತ ನಾವು ಸಾಗಬೇಕಿದೆ. ಸಂಸಾರದ ರಥವನ್ನು ಸುಗಮವಾಗಿ ಎಳೆಯಬೇಕು. ಬದುಕು ವಿಕಾರವಾಗದೆ ವಿಕಾಸವಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಾಗಾರ್ಜುನ(ಈಡಿಗ)-ಎನ್. ರಂಜಿತಬಾಯಿ (ಲಂಬಾಣಿ) ಅಂತರ್ಜಾತಿ ಸೇರಿದಂತೆ, ಉಪ್ಪಾರ-1, ಕುರುಬ-1, ಆದಿದ್ರಾವಿಡ-1 ನಾಲ್ಕು ಜೋಡಿಗಳ ವಿವಾಹ ನೆರವೇರಿತು.

ಶ್ರೀ ಬಸವ ಮಲ್ಲಿಕಾರ್ಜುನ ಸ್ವಾಮಿಗಳು, ಶ್ರೀ ಗೋವಿಂದಪ್ಪ ಶ್ರೀಗಳು, ಶ್ರೀ ಬಸವರಾಜ ಸ್ವಾಮಿಗಳು, ಶರಣೆ ಮುಕ್ತಾಯಕ್ಕ, ಕಾರ್ಯಕ್ರಮದ ದಾಸೋಹಿಗಳಾದ ಡಾ|| ಸನತ್‌ಕುಮಾರ್, ಪೈಲ್ವಾನ್ ತಿಪ್ಪೇಸ್ವಾಮಿ ಮೊದಲಾದವರು ಭಾಗವಹಿಸಿದ್ದರು.

ಜಮುರಾ ಕಲಾವಿದರು ಪ್ರಾರ್ಥಿಸಿದರು. ವೀರಭದ್ರಪ್ಪ ಸ್ವಾಗತಿಸಿದರು. ಪ್ರಕಾಶ ದೇವರು ನಿರೂಪಿಸಿದರು.


ಡಾ. ಶಿವಮೂರ್ತಿ ಮುರುಘಾ ಶರಣರು
ಮೂವತ್ತೆರಡನೇ ವರ್ಷದ ಹನ್ನೆರಡನೇ ತಿಂಗಳ
ಸಾಮೂಹಿಕ ಕಲ್ಯಾಣ ಮಹೋತ್ಸವ
: 05-12-2022 ಸೋಮವಾರ ಸಮಯ : ಬೆಳಗ್ಗೆ 10.30
ಬಸವಕೇಂದ್ರ, ಶ್ರೀ ಮುರುಘಾಮಠ
ಚಿತ್ರದುರ್ಗ - 577 502. ಕರ್ನಾಟಕ
ಮೊ : 08194 - 222250
Web : www.sjmmath.in
Email : basavakendra@gmail.com


ಡಾ. ಶಿವಮೂರ್ತಿ
ಮೂವತ್ತೆರಡನೇ ವರ್ಷದ
ಸಾಮೂಹಿಕ ಕಲ್ಯಾಣ
ದಿನಾಂಕ : 05-12-2022 ಸೋಮವಾರ ಸಮಯ :




ಡಾ. ಶಿವಮೂರ್ತಿ ಮುರುಘಾ ಶರಣರು
05-12-2022